CHAMARAJANAGARA UNIVERSITY
Suvarna Gangotri, Chamarajanagara – 571313

ಕುಲಸಚಿವರು(ಮೌಲ್ಯಮಾಪನ ಕಾರ್ಯಾಲಯ

Ph No: 08226-297512
Email: chamarajanagarauniversity@gmail.com

No:CUC/R(E)O/000/2023-24

Date: 30.09.2023

# ಅಧಿಸೂಚನೆ

ವಿಷಯ:–2023–24ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಾತಿ ದಿನಾಂಕವನ್ನು ಮರುನಿಗಧಿಪಡಿಸುವ ಬಗ್ಗೆ.

ಉಲ್ಲೇಖ:ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:30.09.2023

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಚಾಮರಾಜನಗರ ವಿಶ್ವವಿದ್ಯಾನಿಯದ ಸುವರ್ಣಗಂಗೋತ್ರಿ ಆವರಣ ಮತ್ತು ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಕಾಲೇಜುಗಳಲ್ಲಿ ನಡೆಸುತ್ತಿರುವ ಸ್ನಾತಕೋತ್ತರ ವಿಭಾಗಗಳಿಗೆ 2023–24ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿಯ (ಎಂ.ಎ/ ಎಂ.ಕಾಂ/ ಎಂ.ಎಸ್.ಡಬ್ಲ್ಯೂ/ ಎಂ.ಎಸ್ಸಿ/ ಎಂ.ಬಿ.ಎ/ ಎಂ.ಸಿ.ಎ/ ಎಂ.ಎಲ್.ಐ.ಎಸ್ಸಿ) ಪ್ರವೇಶಾತಿಗೆ ಸಂಬಂಧಿಸಿದಂತೆ ಈಗಾಗಲೇ ನಿಗಧಿಪಡಿಸಿದ್ದ ಕೊನೆಯ ದಿನಾಂಕವನ್ನು ಮಾನ್ಯ ಕುಲಪತಿಯವರ ಅನುಮೋದನೆ ಮೇರೆಗೆ ದಿನಾಂಕ:07.10.2023ಕ್ಕೆ ಮರುನಿಗಧಿಪಡಿಸಿ ಅಧಿಸೂಚನೆ ಹೊರಡಿಸಲಾಗಿದೆ.

| | | |
|---|---|---|
| 01. | ಪ್ರವೇಶಾತಿ ಅರ್ಜಿ ಸ್ವೀಕರಿಸಲು ಪ್ರಾರಂಭ ದಿನಾಂಕ | 04–09–2023 |
| 02. | ಪ್ರವೇಶಾತಿ ಅರ್ಜಿ ಸ್ವೀಕರಿಸಲು ಕೊನೆಯ ಪರಿಷ್ಕೃತ ದಿನಾಂಕ | 07–10–2023 |

ಮೇಲಿನ ಪರಿಷ್ಕೃತ ಪ್ರವೇಶಾತಿ ದಿನಾಂಕದ ವಿವರಗಳನ್ನು ಸರ್ಕಾರಿ/ಖಾಸಗಿ ಅನುದಾನಿತ ಹಾಗೂ ಅನುದಾನೇತರ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರುಗಳು ತಮ್ಮ ಕಾಲೇಜಿನ ವೆಬ್‌ಸೈಟ್ ಮತ್ತು ಸೂಚನಾ ಫಲಕದಲ್ಲಿ ಪ್ರಕಟಿಸುವುದರ ಜೊತೆಗೆ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರ ಗಮನಕ್ಕೆ ತರಲು ಸೂಚಿಸಲಾಗಿದೆ.

## ಪ್ರಾಂಶುಪಾಲರು/ವಿದ್ಯಾರ್ಥಿಗಳಿಗೆ ಸೂಚನೆಗಳು:

1. ಸರ್ಕಾರಿ/ಖಾಸಗಿ ಅನುದಾನಿತ ಹಾಗೂ ಅನುದಾನೇತರ ಮಹಾವಿದ್ಯಾಲಯಗಳ ಎಲ್ಲಾ ಸ್ನಾತಕೋತ್ತರ ಪದವಿ ಪ್ರವೇಶ ಮಿತಿ(Intake) ಸಂಖ್ಯೆಗಳು ವಿಶ್ವವಿದ್ಯಾನಿಲಯವು ಅನುಮೋದನೆ ಮಾಡಿ ನಿಗಧಿಪಡಿಸಿದ ಸಂಖ್ಯೆಯನ್ನು ಮೀರಬಾರದು.
2. ಯುಜಿಸಿಯಿಂದ ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯಗಳಿಂದ ಸ್ನಾತಕ ಪದವಿ ಪಡೆದ ವಿದ್ಯಾರ್ಥಿಗಳು ಮಾತ್ರ ಪ್ರವೇಶಾತಿಗೆ ಅರ್ಹರಾಗಿರುತ್ತಾರೆ.
3. ಪ್ರವೇಶಾತಿ ಅರ್ಜಿ ಮತ್ತದು ಹೆಚ್ಚಿನ ಮಾಹಿತಿಯನ್ನು ಚಾಮರಾಜನಗರ ವಿಶ್ವವಿದ್ಯಾನಿಲಯದ ಜಾಲತಾಣ (www.cuc.karnataka.gov.in) ದಿಂದ ಪಡೆದುಕೊಳ್ಳಬಹುದಾಗಿದೆ.

**ವಿಶೇಷ ಸೂಚನೆ:**

1. ಪ್ರವೇಶಾತಿಯ ಕಡೆಯ ದಿನಾಂಕಗಳು ಮುಗಿದ ನಂತರ, ಯಾವುದೇ ವಿದ್ಯಾರ್ಥಿಗಳ ಮನವಿಯನ್ನು ವಿಶ್ವವಿದ್ಯಾನಿಲಯಕ್ಕೆ ರವಾನೆ (forward) ಮಾಡಬಾರದಾಗಿ ಮೂಲಕ ಕಾಲೇಜುಗಳ ಎಲ್ಲಾ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸಿದೆ. ಪ್ರವೇಶ ಪ್ರಕ್ರಿಯೆಗಳನ್ನು ಕಡೆಯ ದಿನಾಂಕದೊಳಗೆ ಕಡ್ಡಾಯವಾಗಿ ಪೂರ್ಣಗೊಳಿಸಬೇಕು.
2. ಹಳೆಯ ವಿದ್ಯಾರ್ಥಿಗಳಿಗೆ ಮರು ಪ್ರವೇಶ ನೀಡುವ ಮುನ್ನ ನಿಯಮಾವಳಿಗಳಿಗೆ (Regulations) ಅನುಗುಣವಾಗಿ ವಿಶ್ವವಿದ್ಯಾನಿಲಯದ ಅನುಮತಿ ಪಡೆಯುವುದು ಕಡ್ಡಾಯ. ಒಂದು ಪಕ್ಷ ವಿಶ್ವವಿದ್ಯಾನಿಲಯದ ಅನುಮತಿ ಪಡೆಯದೇ ಪ್ರವೇಶ ನೀಡಿದ ಪಕ್ಷದಲ್ಲಿ, ಮುಂದಿನ ಎಲ್ಲಾ ರೀತಿಯ ವ್ಯಾಜ್ಯ, ದಾವೆ, ಕಟ್ಟೆ (Litigation) ಗಳಿಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ನೇರ ಹೊಣೆಗಾರರಾಗಿರುತ್ತಾರೆ ಎಂದು ಸ್ಪಷ್ಟಪಡಿಸಲಾಗಿದೆ.
3. ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರದಿಂದ ವಿದ್ಯಾರ್ಥಿವೇತನ ಮಂಜೂರಾತಿಗೆ ಅರ್ಹವಿರುವ ಕಾಲೇಜುಗಳು ವಿದ್ಯಾರ್ಥಿಗಳ ತಂದೆ/ತಾಯಿ/ಪೋಷಕರ ವಾರ್ಷಿಕ ವರಮಾನಕ್ಕೆ ಅನುಗುಣವಾಗಿ (ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರ ಅಧಿಸೂಚನೆಗಳ ಅನುಸಾರ) SC/ST, OBC ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ನೀಡಬೇಕು. ಶುಲ್ಕ ವಿನಾಯಿತಿ ಪಡೆದ ವಿದ್ಯಾರ್ಥಿಗಳು ಕಡ್ಡಾಯವಾಗಿ ವಿದ್ಯಾರ್ಥಿವೇತನಕ್ಕೆ ನಿಗದಿತ ಸಮಯದಲ್ಲಿ ಸಂಬಂಧಿಸಿದ ಇಲಾಖೆಗೆ ಅರ್ಜಿ ಸಲ್ಲಿಸಬೇಕು ಮತ್ತು ಪ್ರಾಂಶುಪಾಲರು ಸಹ ಅರ್ಜಿ ಸಲ್ಲಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು. ವಿದ್ಯಾರ್ಥಿವೇತನ ಮಂಜೂರಾಗದಂತಹ ಅಥವಾ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ ಶುಲ್ಕವನ್ನು ಪಾವತಿಸಿಕೊಳ್ಳಬೇಕು.

P. Madesh

ಕುಲಸಚಿವರು-(ಮೌಲ್ಯಮಾಪನ)
Registrar (Evaluation)
Chamarajanagara University
Chamarajanagara-571 313

ಪ್ರತಿ:

1. ಸಮಾಜ ಕಲ್ಯಾಣ ಅಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ,
2. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಛೇರಿ, ಚಾಮರಾಜನಗರ ಜಿಲ್ಲೆ.
3. ಪ್ರಾಂಶುಪಾಲರು, ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನೇತರ ಪ್ರಥಮ ದರ್ಜೆ ಕಾಲೇಜು (ಚಾಮರಾಜನಗರ ವಿಶ್ವವಿದ್ಯಾನಿಲಯದ ಸಂಯೋಜನೆಗೊಳಗೊಂಡ ಕಾಲೇಜುಗಳು),
4. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು ಹಾಗೂ ಆಪ್ತ ಸಹಾಯಕರು, ಚಾಮರಾಜನಗರ ವಿಶ್ವವಿದ್ಯಾನಿಲಯ, ಚಾಮರಾಜನಗರ,
5. ಹಣಕಾಸು ಅಧಿಕಾರಿಗಳ ಕಛೇರಿ, ಚಾಮರಾಜನಗರ ವಿಶ್ವವಿದ್ಯಾನಿಲಯ, ಚಾಮರಾಜನಗರ,
6. ನಿರ್ದೇಶಕರು, ಯೋಜನೆ, ಮೇಲುಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳಿ, ಚಾಮರಾಜನಗರ ವಿಶ್ವವಿದ್ಯಾನಿಲಯ, ಚಾಮರಾಜನಗರ,
7. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಚಾಮರಾಜನಗರ ವಿಶ್ವವಿದ್ಯಾನಿಲಯ, ಚಾಮರಾಜನಗರ,
8. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ, ಚಾಮರಾಜನಗರ ವಿಶ್ವವಿದ್ಯಾನಿಲಯ, ಚಾಮರಾಜನಗರ,
9. ಮ್ಯಾನೇಜರ್, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಜಿಲ್ಲಾಧಿಕಾರಿಗಳ ಕಚೇರಿ ಅವರಣ ಚಾಮರಾಜನಗರ,
10. ಕಚೇರಿ ಪ್ರತಿ.